ಬೆಂಗಳೂರು ಡಿಸ್ಟ್ರಿಕ್ಟ್.

ತಾರೀಖು 29ನೆ ನವೆಂಬರ್ 1907.

ಸ್ಥಿರಸ್ವತ್ತಿನ ಹರಾಜ್ ಬಗ್ಗೆ ಕೊಡಲ್ಪಟ್ಟ ಇಸ್ತಿಹಾರ್ ವ ಪ್ರಸಿದ್ಧಪತ್ರಿಕೆ.

1. ಕಂದಾಯದ ಬಾಕೀದಾರರಾದ ಜೋಡಿ ನರಗನಹಳ್ಳಿ ಗ್ರಾಮದ ಜೋಡಿದಾರ್ ರಾಮಸ್ವಾಮೈಯ್ಯಂಗಾರ್ರಿಂದ ಬರಬೇಕಾದ ಜಮ್ಮಾ ಕಂದಾಯದ ಬಾಕೀಗಾಗಿ ಇದರಡಿ ನಮೂದಾಗುವ ಸ್ಥಿರಸ್ವತ್ತು ಬೆಂಗಳೂರು ಡಿಸ್ಟ್ರಿಕ್ಟ್ ನೆಲಮಂಗಲ ತಾಲ್ಲೂಕು ಕಛೇರಿಯಲ್ಲಿ 1908ನೆ ಇಸವಿ ಜನವರಿ 6ನೆ ತಾರೀಖಿನಲ್ಲಿ ಬಹಿರಂಗವಾದ ಹರಾಜು ಮಾಡಲ್ಪಡುತ್ತೆಂದು ಇದರಿಂದ ಪ್ರಸಿದ್ಧಪಡಿಸಲ್ಪಟ್ಟಿದೆ.

ಹರಾಜು ದಿವಾ 11 ಘಂಟೆಗೆ ಉಪಕ್ರಮಿಸಲ್ಪಡುತ್ತೆ. ಸ್ವತ್ತು ಏಕದಂ ಛಡ ದರಖಾಸ್ತುದಾರನ ಹೆಸರಿಗೆ ನಿಲ್ಲಿಸಲ್ಪಡುತ್ತೆ.

2. ಸದರೀ ಸ್ವತ್ತಿಗಾಗಿ ಹರಾಜುದಾರನು 1906—07ನೆ ಸಾಲಿಗೆ ಪೂರ್ತಿಯಾಗಿ ಪಾವತಿ ಮಾಡಬೇಕಾದ ಕಂದಾಯದ ಮೊಬಲಗು ಇದರಡಿ ಕಾಣಿಸಿರುವ ತಖ್ತೆಯಲ್ಲಿ ನಮೂದಿಸಿರುವು ತ್ಯೂಲ್ ಮೇರಿಗೆ ರೂಪಾಯಿ 85—6—2 ಆಗಿರುತ್ತೆ.

3. ಹರಾಜು ಕಾಲದಲ್ಲಿ ಹರಾಜ್‌ದಾರನು ಹರಾಜ್ ಮೊಬಲಗಿನ ಶೇಕಡಾ 25 ರೂಪಾಯಿಗಳನ್ನು ಡಿಪಾಜಿಟ್ಟು ಹಾಜರ್ಮಾಡಬೇಕಾಗಿರುತ್ತೆ. ಅದು ಜಾತಿ ಹರಾಜು ಬಾಬತು ಬಾಕೀ ಮೊಬಲಗು ಹರಾಜ್ ತಾರೀಖು ಲಾಗಾಯಿತು 15 ದಿವಸಗಳಲ್ಲಿ ಪಾವತಿ ಮಾಡಲ್ಪಡದೇ ಹೋದಲ್ಲಿ ಮೇಲೆ ಹೇಳಿದ ಡಿಪಾಜಿಟ್ಟು ಮೊಬಲಗನ್ನು ಹಾಜರ್ಮಾಡಿದವನು ಕಳದುಕೊಳ್ಳಲು ಗುರಿಯಾಗುತ್ತಾನೆ.

4. ಅಂಥಾ ಡಿಪಾಜಿಟ್ಟು ಮೊಬಲಗು ಹಾಜರ್ಮಾಡಲ್ಪಡದೆ ಯಾ ಹರಾಜು ಬಾಬತು ಬಾಕೀ ಮೊಬಲಗು ಪಾವತಿ ಮಾಡಲ್ಪಡದೆ ಹೋದಾಗ್ಯೆ ಸದರೀ ಸ್ವತ್ತು ಮೊದಲು ಹರಾಜುದಾರನ ಖರ್ಚಿನಿಂದಲೂ ಮತ್ತು ಅವನಿಗೆ ಅದರಿಂದ ಉಂಟಾಗಬಹುದಾದ ನಷ್ಟಕ್ಕೆ ಗುರಿಪಡಿಸಿಯಾ ಪುನಃ ಹರಾಜು ಮಾಡಲ್ಪಡುತ್ತೆ.

5. ಹರಾಜಿನಲ್ಲಿ ಸವಾಲ್ ಮಾಡತಕ್ಕ ಜನಗಳು ಖುದ್ದು ತಮ್ಮ ಸ್ವಂತಕ್ಕೊಸ್ಕರ ಸವಾಲ್ ಮಾಡುತ್ತಾರೆಯೇ ಯಾ ಏಜಂಟು ಯಾ ಮುತಾಲೀಕರಾಗಿ ಸವಾಲ್ ಮಾಡುತ್ತಾರೆಯೇ ಎಂಬ ಅಂಶವನ್ನು ತಿಳಿಸಬೇಕೆಂತಲೂ ಇತರರಿಗೋಸ್ಕರ ಮುತಾಲೀಕರಾಗಿ ಸವಾಲ್ ಮಾಡುವ ಸಂದರ್ಭದಲ್ಲಿ ಅಂಥಾ ತನ್ನ ಯಜಮಾನರಿಂದ ಸಹಿ ಮಾಡಲ್ಪಟ್ಟ ಲಿಖಿತವಾದ ಅಧಿಕಾರ ಪ್ರತಿಕೆಯನ್ನು ಹಾಜರ್ಮಾಡುವಂತೆಯೂ ಕೇಳಿಲ್ಪಡಬಹುದು. ಅದನ್ನ ಅವರು ಹಾಜರ್ಮಾಡದೆ ಹೋದಲ್ಲಿ ಅವರ ಸವಾಲುಗಳು ತಿರಸ್ಕರಿಸಲ್ಪಡಬಹುದು.

6. ಹರಾಜಿನಲ್ಲಿ ಸ್ವತ್ತು ಯಾರ ಹೆಸರಿಗಾದರೂ ನಿಲ್ಲಿಸಲ್ಪಡುವದಕ್ಕೆ ಮುಂಚಿತವಾಗಿ, ಬಾಕೀದಾರನಾಗಲೀ ಅತನ ತರಫಿನವನಾಗಿ ಪ್ರವರ್ತಿಸುವ ಯಾ ಸದರೀ ಸ್ವತ್ತಿನಲ್ಲಿ ಬಾಧ್ಯತೆ ಇರುತ್ತೆಂದು ಹೇಳಿಯುವ ಯಾವ ಇತರ ಮನುಷ್ಯನೇ ಆಗಲೀ ಬಾಕಿಯಲ್ಲಿ ಬಂದಿರುವ ಪೂರಾ ಕಂದಾಯದ ಹಣವನ್ನು, ಬಡ್ಡಿ ಮತ್ತು ಇತರ ಖರ್ಚುಗಳ ಸಮೇತ ಹಾಜರ್ಮಾಡುವ ಪಕ್ಷಕ್ಕೆ ಹರಾಜು ನಿಲ್ಲಿಸಲ್ಪಡುತ್ತೆ.

7. ಹರಾಜು ಡೆಪ್ಯೂಟಿ ಕಮಿಷನರವರಿಂದ ಮಂಜೂರ್ಮಾಡಲ್ಪಡುವ ತನಕ ಸ್ವತ್ತಿನ ಹರಾಜು ಪೂರ್ತಿಯಾಗುವದಿಲ್ಲ.

8. ಹರಾಜಿನಲ್ಲಿ ತೆಗದುಕೊಂಡವರು ಹರಾಜ್ ಮೊಬಲಗನ್ನು ಪೂರ್ತಿಯಾಗಿ ಪಾವತಿ ಮಾಡಿದ ಮೇಲೆ ಡೆಪ್ಯೂಟಿ ಕಮಿಷನರವರಿಂದ ಹರಾಜು ಮಂಜೂರ್ಮಾಡಲ್ಪಟ್ಟ ಕೂಡ್ಲೆ, ಹರಾಜುದಾರು ಸದರೀ ಸ್ವತ್ತಿನ ಸ್ವಾಧೀನವನ್ನು ಹೊಂದುವರು. ಮತ್ತು ಸದರೀ ಸ್ವತ್ತು ಹರಾಜುದಾರನ ಹೆಸರಿನಲ್ಲಿ ರಿಜಿಸ್ಟರ್ ಮಾಡಲ್ಪಟ್ಟು ಡೆಪ್ಯೂಟಿ ಕಮಿಷನರವರಿಂದ ಸೈ ಮೊಹರ್ ಮಾಡಲ್ಪಟ್ಟ ಒಂದು ಹರಾಜ್ ಸರ್ಟಿಫಿಕೇಟ್ ಆತನಿಗೆ ಕೊಡಲ್ಪಡುವದು. ಸ್ವತ್ತಿನ ವಿವರಣೆಯಲ್ಲಿಯೂ ಯಾ ವಿಸ್ತೀರ್ಣದಲ್ಲಿಯೂ ಇರುವ ಸ್ಖಲಿತ್ಯಗಳಿಗೆ ಗವರ್ಮೆಂಟಿನವರು ಜವಾಬ್‌ದಾರ್ಲನೆಂಬ ಅಂಶವನ್ನು ಸ್ಪಷ್ಟವಾಗಿ ತಿಳಿದಿರತಕ್ಕದ್ದು.

9. ಹರಾಜಿನಿಂದ ತಮಿಗೆ ನಷ್ಟ ಉಂಟಾಯಿತೆಂದು ಎಣಿಸುವ ಜನಗಳು ಹರಾಜು ತಾರೀಖು ಲಾಗಾಯಿತು 30 ದಿವಸಗಳಲ್ಲಿ ಡೆಪ್ಯೂಟಿ ಕಮಿಷ್ಷನರವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಮತ್ತು ಅವರ ಹುಕುಮಿನ ಮೇಲೆ ಕಾನೂನಿನಿಂದ ವಿಧಿಸಲ್ಪಟ್ಟ ವಾಯಿದೆಯಲ್ಲಿ ಗವರ್ಮೆಂಟಿನವರಿಗೆ ಅಪ್ಪೀಲ್ ಮಾಡಿಕೊಳ್ಳುವದಕ್ಕೂ ಸ್ವತಂತ್ರರಾಗಿರುತ್ತಾರೆ. ಸ್ವತ್ತಿನ ವಿಕ್ರಯವು ಆಂಥಾ ಅಪ್ಪೀಲಿನಲ್ಲಿ ಆಗುವ ಫೈಸಲ್ ಹುಕುಮಿಗೆ ಬದ್ಧವಾಗಿರತಕ್ಕದ್ದು:—

ಡಿಸ್ಟ್ರಿಕ್ಟ್	ತಾಲ್ಲೂಕು	ಹೋಬಳಿ	ಗ್ರಾಮ.	ಜಾಕೀದಾರರ ಹೆಸರು.	ಸ್ವತ್ತಿನ ತಪ್ಪೀಲ್. ಕಟ್ಟಡಗಳು. ಪಟ್ಟಿಯಲ್ಲಿರುವ ಹೆಸರು	ಕಟ್ಟಡಗಳು. ಅಂದಾಜು ಕಿಮ್ಮತ್ತು.	ಜಮೀನು. ಸರ್ವೆ ನಂಬರು ಹಿಸ್ಸೆ ನಂಬರು.	ಜಮೀನು. ಖುಷ್ಕಿ ತರಿ ಅಥವಾ ಬಾಗಾಯಿತು	ಜಮೀನು. ವಿಸ್ತೀರ್ಣ.	ಜಮೀನು. ಪ್ರಕಾರ	ಅಂದಾಜು.	ಸಾಲಿಯಾನಾ ಸರ್ಕಾರಿ ಜಿಪ್ಪಣಿ ಗಂಜಿಯಾ	ಸರ್ಕಾರಿ ಬರಬೇಕಾದ ಬಾಕಿ.
ಬೆಂಗಳೂರು	ನೆಲಮಂಗಲ	ದಾಸನಪುರ	ಜೋಡಿ ಹನ್ನಸಂದ್ರ	ರಾಮಸ್ವಾಮೈಯ್ಯಂಗಾರು	ನನಸೆಗಳು 258	600	...	ಖುರಾಬು ...	ಎ. ಗು. 89 24	ರೂ. ಆ. ಪೈ. 11 0 0	ರೂ.	ಜಮೀನು ರೂ. ಎ. ಪೈ. 115 7 0
								ಖುಷ್ಕಿ ...	469 32	315 1 6	600	
								ತರಿ ...	6 23	28 1 9		
								ಬಾಗಾಯಿತು.	0 5	0 4 0		
								ಜಮ್ಮಾ ...	566 4	354 7 3		ಜಮೀನು ರೂ. ಎ. ಪೈ. 85 6 2

ಷರಾ—ಜೋಡೀದಾರರುಗಳಿಂದಲಾಗಲಿ ಯಾ ಖಾಯಂಗುತ್ತಾದಾರರುಗಳಿಂದಲಾಗಲಿ ಬಾಧ್ಯತೆ ಮೂಲಕ ಇವರುಗಳಿಗೆ ಹಿಂದೆಯಿದ್ದವರಿಂದಲಾಗಲಿ ಉಂಟುಮಾಡಲ್ಪಟ್ಟ ತಪಾಂ ಹಿಡುವಳಿಗಾಗಲಿ ದೇಣಿಗಳಿಗೆ ಆಗಲಿ ಮತ್ತು ಹಕ್ಕುಗಳಿಗಾಗಲಿ ಅಥವಾ ಮತ್ಯಾವ ಸಂಬಂಧಗಳಿಗಾಗಲಿ ಸದರಿ ಹರಾಜು ಪಳಪಟ್ಟಿರುವದಿಲ್ಲ.

ಡಿ. ದೇವರಾಜ ಅರಸ್,
ಡೆಪ್ಯೂಟಿ ಕಮಿಷನರ್.